ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಕೊಡಗು ಜಿಲ್ಲೆಯಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆ ತುಂಬುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) -

42(34) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೊಡಗು ಜಿಲ್ಲೆಯಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಗಳಿವೆ; ಜಿಲ್ಲೆಗೆ ಮಂಜೂರಾಗಿರುವ ಹಾಗೂ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಜಿಲ್ಲೆಯಲ್ಲಿ ಹಲವಾರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಹೆಚ್ಚುವರಿ ಪ್ರಭಾರದ ಜವಾಬ್ದಾರಿ ಇರುವುದಿರಂದ ಗ್ರಾಮ ಪಂಚಾಯಿತಿಗಳ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ತುಂಬಲಾಗುವುದು?